ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ವಕೀಲರಿಂದಃ-

ದೇವರಾಜು ರವರು ಅವರ ಸ್ವಾಧೀನದಲ್ಲಿ ಇದ್ದ ಸ್ವತ್ತನ್ನು ಅವರ ಮಗಳಿಗೆ ದಾನ ಮಾಡಿದ್ದಾರೆ ಎಂದರೆ ಸಾಕ್ಷಿ ದಾನ ಮಾಡಿದ್ದಾರೆ ಆದರೆ ಆ ಸ್ವತ್ತಿನ ಮೇಲೆ ನಮಗೂ ಹಕ್ಕಿದೆ ಎಂದು ನುಡಿಯುತ್ತಾರೆ. ದಿನಾಂಕ 07.09.2020ರ ಕ್ರಯ ಪತ್ರದಲ್ಲಿ ಅವರ ಭಾಗದ ಸ್ವತ್ತನ್ನು ಮಾರಾಟ ಮಾಡುತ್ತಿರುವವುದಾಗಿ ಬರೆಯಲಾಗಿದೆ ಎಂದರೆ ಸಾಕ್ಷಿ ಅದು ಸಾಧ್ಯವಿಲ್ಲ ಎಂದು ನುಡಿಯುತ್ತಾರೆ. ದಿನಾಂಕ 11.11.2016ರಂದು 6ನೇ ಪ್ರತಿವಾದಿ ಬರೆದುಕೊಟ್ಟಿರುವ ಕ್ರಯ ಪತ್ರದಲ್ಲೂ ಸಹ ಭಾಗದ ಸ್ವತ್ತನ್ನು ಮಾರಾಟ ಮಾಡುತ್ತಿರುವವುದಾಗಿ ಬರೆಯಲಾಗಿದೆ ಎಂದರೆ ಸಾಕ್ಷಿ ಅದು ಕಾನೂನಿಗೆ ವಿರುದ್ಧವಾಗಿ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ದಿನಾಂಕ 03.02.2017ರಂದು ಬರೆದುಕೊಟ್ಟ ಕ್ರಯ ಪತ್ರದಲ್ಲೂ ಸಹ ಭಾಗದ ಸ್ವತ್ತನ್ನು ಮಾರಾಟ ಮಾಡುತ್ತಿರುವವುದಾಗಿ ಬರೆಯಲಾಗಿದೆ ಎಂದರೆ ಸಾಕ್ಷಿ ಅದರಲ್ಲಿ ನಮಗೆ ಯಾವುದೇ ಭಾಗ ಕೊಟ್ಟಿಲ್ಲದೆ ಮಾರಾಟ ಮಾಡಿರುವ ಕಾನೂನು ಬಾಹಿರವಾಗಿರುತ್ತದೆ ಎಂದು ನುಡಿಯುತ್ತಾರೆ.

ಇದು ಒಂದೇ ಸ್ವತ್ತಿಗೆ ನಿಮ್ಮ ತಂದೆ ಖಾತೆ ಮಾಡಿಸಿಕೊಳ್ಳಲು ಪ್ರಯತ್ನಪಟ್ಟಿದ್ದಾರೆ ಎಂದರೆ ಸಾಕ್ಷಿ ಹೌದು ಪ್ರಯತ್ನಿಸಿರುತ್ತಾರೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಯ ಈಗ ಬೆಲೆ ಜಾಸ್ತಿಯಾಗಿರುವ ಕಾರಣ ಈ ದಾವೆ ಸಲ್ಲಿಸಿರುತ್ತೇವೆ ಎಂದರೆ ಸರಿಯಲ್ಲ. ಮರಿದೇವರು ವತ್ತು ಅವರ ಅಣ್ಣತಮ್ಮಂದಿರು ಯಾವ ಯಾವ ಆಸ್ತಿಗಳನ್ನು ಭಾಗ ಮಾಡಿಕೊಂಡಿರುವ ಬಗ್ಗೆ ಹೇಳಿರುವುದಿಲ್ಲ ಎಂದರೆ ಸಾಕ್ಷಿ ಎಂ.ಆರ್ ಹಾಜರುಪಡಿಸಿರುತ್ತೇನೆ. ವಾದ

ಪತ್ರದಲ್ಲಿ ಈ ವಿಚಾರ ಹೇಳಿಲ್ಲ ಎಂದರೆ ಸರಿಯಲ್ಲ. ಮರಿದೇವರ ಅಣ್ಣ ತಮ್ಮಂದಿರುಗಳಿಗೆ ಎಷ್ಟು ಭಾಗ ಹೋಗಿರುತ್ತದೆ ಎಂದು ಹೇಳಿಲ್ಲ ಎಂದರೆ ಸರಿಯಲ್ಲ. ಮರಿದೇವರ ಅಣ್ಣ ತಮ್ಮಂದಿರು ಈಗಾಗಲೇ ಭಾಗ ಮಾಡಿಕೊಂಡಿದ್ದರೂ ಸಹ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ- ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)

(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ನಿವೇದಿತ ಟಿ.ಎಂ.)
1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.